# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **2728** |
| ಸದಸ್ಯರ ಹೆಸರು | : | ಡಾ: ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 28.03.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ದಿನಾಂಕ:01/08/2008ರ ನಂತರ ನೇಮಕವಾದ ಪ್ರೌಢಶಾಲಾ ಶಿಕ್ಷಕರು, ಮುಖ್ಯ ಶಿಕ್ಷಕರು ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳಿಗೆ ವಾರ್ಷಿಕ ಬಡ್ತಿಯನ್ನು ಮೂಲ ವೇತನದಲ್ಲಿ ಸೇರಿಸುವಲ್ಲಿ ಅನ್ಯಾಯಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ನಿಯಮಗಳನ್ನು ರೂಪಿಸಿದ ಸರ್ಕಾರವೇ ಅನುಷ್ಠಾನಗೊಳಿಸದಿರುವುದು ಸರಿಯೇ; | 5ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ / ಅನುದಾನಿತ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜಿನ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಿ ದಿನಾಂಕ: 12-05-2006ರ ಸರ್ಕಾರಿ ಆದೇಶ ಸಂಖ್ಯೆ: ಆಇ 14 ಎಸ್.ಆರ್.ಪಿ 2006ರಲ್ಲಿ ಆದೇಶಗಳನ್ನು ಹೊರಡಿಸಲಾಗಿತ್ತು. ತದನಂತರ ಈ ಭತ್ಯೆಯನ್ನು ಪರಿಷ್ಕರಿಸಿ ಮುಂದುರಿಸಲಾಗಿರುತ್ತದೆ ಮತ್ತು ಅಂತಿಮವಾಗಿ ದಿನಾಂಕ:09-05-2012ರ ಸರ್ಕಾರಿ ಆದೇಶ ಸಂಖ್ಯೆ: ಇಡಿ 264 ಎಸ್.ಎಲ್.ಬಿ 2012ರಲ್ಲಿ ಸದರಿ ಭತ್ಯೆಯನ್ನು ಪರಿಷ್ಕರಿಸಲಾಗಿರುತ್ತದೆ.<br><br>ಪರಿಷ್ಕೃತ ವಿಶೇಷ ಭತ್ಯೆಯ ಆದೇಶದಲ್ಲಿಯೂ ಸಹ ಪ್ರೌಢ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಈ ಭತ್ಯೆಯನ್ನು ಮಂಜೂರು ಮಾಡಿರುವುದಿಲ್ಲ. 5ನೇ ರಾಜ್ಯ ವೇತನ ಆಯೋಗವು ಸಹ, ಸರ್ಕಾರಿ / ಅನುದಾನಿತ ಶಾಲೆಗಳ ಶಿಕ್ಷಕರುಗಳಿಗೆ ಮಂಜೂರು ಮಾಡಿರುವಂತೆ ವಿಶೇಷ ಭತ್ಯೆಯನ್ನು ಪ್ರೌಢ ಶಾಲೆಗಳ ಮುಖ್ಯಶಿಕ್ಷಕರುಗಳಿಗೂ ಕೂಡ ಮಂಜೂರು ಮಾಡುವಂತೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲ.<br><br>6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ, ಶಿಕ್ಷಣ ಇಲಾಖೆಯ ಶಿಕ್ಷಕರನ್ನು ಒಳಗೊಂಡಂತೆ ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳನ್ನು ದಿನಾಂಕ:01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಆಯೋಗದ ಶಿಫಾರಸ್ಸಿನಂತೆ, ಸರ್ಕಾರಿ/ ಅನುದಾನಿತ ಪ್ರಾಥಮಿಕ |
| (ಆ) | ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಇವರಿಗೆ ಈ ಸೌಲಭ್ಯ ಒದಗಿಸಲಾಗುವುದು ಹಾಗೂ ಮರು ಪಾವತಿಸಿಕೊಳ್ಳುವ ಆದೇಶವನ್ನು ವಾಪಸ್ಸು ಪಡೆಯಲಾಗುವುದೇ; (ಸಂಪೂರ್ಣ ವಿವರ ನೀಡುವುದು) | |
| (ಇ) | ದಿನಾಂಕ:01/08/2008ರ ಪೂರ್ವದಲ್ಲಿ ನೇಮಕವಾದ ಪ್ರೌಢಶಾಲಾ ಶಿಕ್ಷಕರು, ಮುಖ್ಯ ಶಿಕ್ಷಕರುಗಳಿಗೆ ವಾರ್ಷಿಕ ವೇತನ ನೀಡದಿರಲು ಕಾರಣವೇನು; ದಿನಾಂಕ: 01/08/2008ರ ನಂತರ ನೇಮಕವಾದ ಪ್ರೌಢಶಾಲಾ ಶಿಕ್ಷಕರು, ಮುಖ್ಯ ಶಿಕ್ಷಕರಿಗೂ ವಾರ್ಷಿಕ ವೇತನ ನೀಡಲು ನಿರಾಕರಿಸಿರುವುದಕ್ಕೆ ಕಾರಣಗಳೇನು; (ವಿವರ ನೀಡುವುದು) | |

| | | |
|---|---|---|
| | | ಮತ್ತು ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ನೀಡಲಾಗುತ್ತಿದ್ದ ಮಾಸಿಕ ವಿಶೇಷ ಭತ್ಯೆಯನ್ನು ಅನ್ವಯಿಸುವ ಶಿಕ್ಷಕರ ಮೂಲ ವೇತನದೊಂದಿಗೆ ವಿಲೀನಗೊಳಿಸಿ ವೇತನ ಶ್ರೇಣಿಗಳನ್ನು ದಿನಾಂಕ : 01-07-2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶ ಹೊರಡಿಸಿದ್ದು, ಈ ವಿಶೇಷ ಭತ್ಯೆಯ ಎಲ್ಲಾ ಆದೇಶಗಳನ್ನು ದಿನಾಂಕ:01-04-2018 ರಿಂದ ಜಾರಿಗೆ ಬರುವಂತೆ ನಿರಸನಗೊಳಿಸಿ (ರದ್ದುಪಡಿಸಿ) ದಿನಾಂಕ: 19-04-2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 6 ಎಸ್.ಆರ್.ಪಿ. 2018ರಲ್ಲಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಇದು ಸರ್ಕಾರದ ನೀತಿ ನಿರ್ಣಯವಾಗಿರುತ್ತದೆ.<br><br>ಆದರೆ, ಸರ್ಕಾರದ ಆದೇಶ ಸಂಖ್ಯೆ: ಇಡಿ 255 ಎಸ್‌ಎಲ್‌ಬಿ 2016 ದಿನಾಂಕ: 23.07.2018ರಂತೆ ದಿನಾಂಕ: 01.08.2008ರ ನಂತರ ನೇಮಕಗೊಂಡ ಸರ್ಕಾರಿ/ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.<br><br>2007-08ರ ಅದಿಸೂಚನೆಯ 3350 ಪ್ರೌಢಶಾಲಾ ಶಿಕ್ಷಕರಲ್ಲಿ ಸುಮಾರು 1250 ಶಿಕ್ಷಕರು ಒಂದೇ ಅಧಿಸೂಚನೆಯಡಿ ನೇಮಕ ಹೊಂದಿದ್ದರೂ ದಿನಾಂಕ: 01-08-2008ರ ನಂತರ ನೇಮಕಾತಿ ಆದೇಶ ಪಡೆದು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಸದರಿಯವರಿಗೆ ಸರ್ಕಾರಿ ಆದೇಶದಂತೆ ವಿಶೇಷ ಭತ್ಯೆ ಅವಕಾಶವಿರುವುದಿಲ್ಲವಾದ್ದರಿಂದ ಮಂಜೂರು ಮಾಡಿರುವುದಿಲ್ಲ.<br><br>ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರುಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ನೀಡುತ್ತಿರುವ ವಿಶೇಷ ಭತ್ಯೆಯನ್ನು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೂ ಮಂಜೂರು ಮಾಡುವಂತೆ ಆಡಳಿತ ಇಲಾಖೆಯಾಗಲೀ ಅಥವಾ ಮುಖ್ಯ ಶಿಕ್ಷಕ ವೃಂದದ ನೌಕರರ ಸಂಘಟನೆಗಳಾಗಲೀ 6ನೇ ರಾಜ್ಯ ವೇತನ ಆಯೋಗಕ್ಕೆ ಯಾವುದೇ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ. ವೇತನ ಆಯೋಗವು ಸಹ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಿ ವೇತನ ಪರಿಷ್ಕರಿಸುವಂತೆ |

| | | |
|---|---|---|
| | | ಶಿಫಾರಸ್ಸು ಮಾಡಿರುವುದಿಲ್ಲ.<br><br>ಈ ಮೇಲೆ ತಿಳಿಸಿದ ದಿನಾಂಕ:19-04-2018ರ ಆದೇಶದನ್ವಯ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಮಂಜೂರು ಮಾಡಲಾಗಿದ್ದ ವಿಶೇಷ ಭತ್ಯೆಯ ಎಲ್ಲಾ ಆದೇಶಗಳನ್ನು ದಿನಾಂಕ : 01-04-2018ರಿಂದ ಜಾರಿಗೆ ಬರುವಂತೆ ನಿರಸನಗೊಳಿಸಿರುವುದರಿಂದ ಪ್ರಸ್ತುತ ವಿಶೇಷ ಭತ್ಯೆಯ ಆದೇಶಗಳು ಚಾಲ್ತಿಯಲ್ಲಿರುವುದಿಲ್ಲ. ಚಾಲ್ತಿಯಲ್ಲಿಲ್ಲದ ಆದೇಶವನ್ನು ಪುನಃಸ್ಥಾಪಿಸಿ ವಿಶೇಷ ಭತ್ಯೆಯನ್ನು ಪುನ: ಮಂಜೂರು ಮಾಡಲು 2018ರ ಪರಿಷ್ಕೃತ ವೇತನ ಶ್ರೇಣಿಯ ನಿಯಮಗಳಲ್ಲಿ ಮತ್ತು ಇತರ ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಆದುದರಿಂದ, ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಮಂಜೂರು ಮಾಡಲಾಗಿದ್ದ ವಿಶೇಷ ಭತ್ಯೆಯನ್ನು ಆಧಾರವಾಗಿರಿಸಿ ಚಾಲ್ತಿಯಲ್ಲಿಲ್ಲದ ಆದೇಶದ ಆಧಾರದ ಮೇಲೆ ಪ್ರೌಢ ಶಾಲಾ ಮುಖ್ಯ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ದಿನಾಂಕ : 01-04-2006 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಮಂಜೂರು ಮಾಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. |

ಸಂಖ್ಯೆ: ಇಪಿ 69 ಎಸ್‌ಎಲ್‌ಬಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು